# ಪ್ರಜಾಸೇವಾ ವ್ಯವಸ್ಥೆ ದೇಶಕ್ಕೆ ಮಾದರಿ ಸಿಎಂ ಡಿ.ಕೆ. ಶಿವಕುಮಾರ್

## ವಿಧಾನಸೌಧ, ಜಿಲ್ಲಾಧಿಕಾರಿ ಕಚೇರಿ ಅಥವಾ ತಾಲ್ಲೂಕು ಕಚೇರಿಗಳಲ್ಲಿ ಕುಳಿತು ಜನರಿಂದ ದೂರವಿದ್ದು, ಆಡಳಿತ ನಡೆಸುವುದು ಸರಿಯಲ್ಲ

**• ಉದಯವಾಹಿನಿ ವಿಜಯನಗರ:**

ರಾಜರ ಕಾಲ ಮುಗಿದು ಪ್ರಜಾಪ್ರಭುತ್ವ ಬಂದಿದೆ. ನನ್ನನ್ನು ನಾಡಿನ ದೊರೆ ಎನ್ನುವ ಬದಲು ಪ್ರಜಾಸೇವಕ ಎಂದು ಕರೆದರೆ ನನಗೆ ಅತ್ಯಂತ ಸಂತೋಷವಾಗುತ್ತದೆ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹೇಳಿದರು.

ಕೂಡ್ಲಿಗಿಯಲ್ಲಿ ಶನಿವಾರ ನೂತನ 'ಪ್ರಜಾಸೇವಾ ಇಲಾಖೆ'ಗೆ ಚಾಲನೆ ನೀಡಿ ಮಾತನಾಡಿದ ಅವರು, 'ಜನಸೇವೆಯೇ ಜನಾರ್ದನ ಸೇವೆ' ಎಂಬ ನಂಬಿಕೆಯಿಂದ ಸರ್ಕಾರ ಕಾರ್ಯ ನಿರ್ವಹಿಸುತ್ತಿದೆ. ಜನರು ತಮ್ಮ ಕೆಲಸಗಳಿಗಾಗಿ ಸರ್ಕಾರಿ ಕಚೇರಿಗಳು ಹಾಗೂ ಅಧಿಕಾರಿಗಳ

**1 :224 ವಿಧಾನಸಭಾ ಕ್ಷೇತ್ರಗಳಲ್ಲೂ**
**2 : ಸರ್ಕಾರದ ಸೌಲಭ್ಯಗಳು, ಗ್ಯಾರಂಟಿ**
**3 : ಪಿಂಚಣಿ, ಭೂಮಿ ವ್ಯಾಜ್ಯ, ಖಾತೆ**

ಬಳಿ ಅಲೆಯುವ ಪರಿಸ್ಥಿತಿ ನಿವಾರಿಸಿ, ಆಡಳಿತವನ್ನು ನೇರವಾಗಿ ಜನರ ಮನೆಬಾಗಿಲಿಗೆ ಕೊಂಡೊಯ್ಯುವುದು ಯೋಜನೆಯ ಉದ್ದೇಶ ಎಂದರು. ವಿಧಾನಸೌಧ, ಜಿಲ್ಲಾಧಿಕಾರಿ ಕಚೇರಿ ಅಥವಾ ತಾಲ್ಲೂಕು ಕಚೇರಿಗಳಲ್ಲಿ ಕುಳಿತು ಜನರಿಂದ ದೂರವಿದ್ದು, ಆಡಳಿತ ನಡೆಸುವುದು ಸರಿಯಲ್ಲ. ಪ್ರತಿಯೊಬ್ಬರಿಗೂ ಸಚಿವರು, ಶಾಸಕರು ಅಥವಾ ಅಧಿಕಾರಿಗಳನ್ನು ನೇರವಾಗಿ ಭೇಟಿ ಮಾಡಲು ಸಾಧ್ಯವಾಗುವುದಿಲ್ಲ. ಆದ್ದರಿಂದ ಅಧಿಕಾರಿಗಳೇ ಜನರ ಬಳಿಗೆ ತೆರಳಿ ಸಮಸ್ಯೆಗಳನ್ನು ಆಲಿಸಿ, ಸ್ಥಳದಲ್ಲೇ ಸಾಧ್ಯವಾದಷ್ಟು ಪರಿಹಾರ ಒದಗಿಸಬೇಕು ಎಂದು ಹೇಳಿದರು. ರಾಜ್ಯದ 224 ವಿಧಾನಸಭಾ ಕ್ಷೇತ್ರಗಳಲ್ಲೂ ಪ್ರಜಾಸೇವಾ ವ್ಯವಸ್ಥೆ


☛ ಉದಯವಾಹಿನಿ ಚಿತ್ರ

> ಬಡವರು ಹಾಗೂ ಶೋಷಿತರು ತಹಶಿಲ್ದಾರ್, ಉಪವಿಭಾಗಾಧಿಕಾರಿ ಅಥವಾ ಜಿಲ್ಲಾಧಿಕಾರಿ ಮಟ್ಟದ ವ್ಯಾಜ್ಯಗಳಲ್ಲಿ ಕಾನೂನು ಹೋರಾಟ ನಡೆಸಲು ಉಚಿತ ವಕೀಲರ ಸೇವೆ ಒದಗಿಸಿ ನೆರವು ನೀಡಲಾಗುವುದು. ಸಂಪೂರ್ಣ ಪರಿಹಾರ ದೊರೆಯುವವರೆಗೆ ಸರ್ಕಾರ ಅರ್ಜಿದಾರರ ಬೆನ್ನಿಗೆ ನಿಲ್ಲಲಿದೆ ಎಂದು ಭರವಸೆ ನೀಡಿದರು.
> – ಸಿಎಂ ಡಿ.ಕೆ. ಶಿವಕುಮಾರ್

ಜಾರಿಯಾಗಲಿದೆ. ಪ್ರತಿ ತಿಂಗಳ ಮೊದಲ ಮತ್ತು ಮೂರನೇ ಶನಿವಾರ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಜನರ ಮಧ್ಯೆ ಇದ್ದು ಕಾರ್ಯನಿರ್ವಹಿಸುವಂತೆ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಸಚಿವರು ತಾಲ್ಲೂಕು ಹಾಗೂ ಹೋಬಳಿ ಮಟ್ಟದಲ್ಲಿ ಮತ್ತು ಶಾಸಕರು ಪಂಚಾಯತ್ ಮಟ್ಟದಲ್ಲಿ ಕಾರ್ಯಕ್ರಮವನ್ನು ಮುನ್ನಡೆಸಲಿದ್ದಾರೆ

### ಟೀಕೆಗಳಿಗೆ ತಲೆಕೆಡಿಸಿಕೊಳ್ಳುವುದಿಲ್ಲ

> ಕೂಡ್ಲಿಗಿಯಲ್ಲಿರುವ ಮಹಾತ್ಮ ಗಾಂಧೀಜಿ ಅವರ ಚಿತಾಭಸ್ಮ ಇರಿಸಿರುವ ಪವಿತ್ರ ಸ್ಥಳಕ್ಕೆ ಭೇಟಿ ನೀಡಿ ನಮನ ಸಲ್ಲಿಸಿರುವುದಾಗಿ ಮುಖ್ಯಮಂತ್ರಿ ತಿಳಿಸಿದರು. ಬಸವಣ್ಣನವರ ಐಕ್ಯಸ್ಥಳಕ್ಕೆ ಭೇಟಿ ನೀಡಿದ್ದನ್ನು ಹಾಗೂ ಬರಪೀಡಿತ ಪ್ರದೇಶಗಳ ವೀಕ್ಷಣೆ ನಡೆಸಿದ್ದನ್ನೂ ಸ್ಮರಿಸಿದರು.

ಎಂದು ತಿಳಿಸಿದರು.

ಶಾಸಕರ ಅನುಪಸ್ಥಿತಿಯಲ್ಲಿ ಅಧಿಕಾರಿಗಳೇ ಪಂಚಾಯತ್ ಕೇಂದ್ರಗಳಿಗೆ ತೆರಳಿ ಸಣ್ಣ ಸಭೆ ನಡೆಸಿ, ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಿ ಪರಿಹರಿಸಬೇಕು ಎಂದು ಸೂಚಿಸಿದರು. ಅರ್ಜಿ ಸ್ವೀಕರಿಸುವುದಷ್ಟೇ ಅಲ್ಲ, ಪರಿಹಾರ ನೀಡಬೇಕು: 'ಸಾರ್ವಜನಿಕರಿಂದ ಅರ್ಜಿ ಸ್ವೀಕರಿಸಿ ಸ್ವೀಕೃತಿ ನೀಡುವುದಷ್ಟೇ ಯೋಜನೆಯ ಯಶಸ್ಸಲ್ಲ. ಅರ್ಜಿದಾರರಿಗೆ ಸೂಕ್ತ ಪರಿಹಾರ ತಲುಪಿದಾಗ ಮಾತ್ರ ಯೋಜನೆ ಯಶಸ್ವಿಯಾಗಿದೆ ಎಂದು ಹೇಳಬಹುದು. ಜನರ ಮುಖದಲ್ಲಿ ನಗು ಕಾಣುವುದೇ ಸರ್ಕಾರದ ಯಶಸ್ಸು' ಎಂದು ಸಿಎಂ ಹೇಳಿದರು. ಪಿಂಚಣಿ, ಭೂಮಿ ವ್ಯಾಜ್ಯ, ಖಾತೆ ಬದಲಾವಣೆ, ಸರ್ಕಾರದ ಸೌಲಭ್ಯಗಳು, ಗ್ಯಾರಂಟಿ ಯೋಜನೆಗಳು, ಮನೆ ಮತ್ತು ನಿವೇಶನ ಸೇರಿದಂತೆ ವಿವಿಧ ವಿಷಯಗಳ ಅರ್ಜಿಗಳನ್ನು ಸ್ಥಳದಲ್ಲೇ ಪರಿಶೀಲಿಸಿ ಪರಿಹಾರ ಒದಗಿಸಲಾಗುವುದು. ಅರ್ಜಿ ತಿರಸ್ಕೃತವಾದರೆ ಅದಕ್ಕೆ ಕಾರಣವನ್ನೂ ಅರ್ಜಿದಾರರಿಗೆ ಸ್ಪಷ್ಟಪಡಿಸಲಾಗುವುದು ಎಂದರು.

'ಹೆಲಿಕಾಪ್ಟರ್ ಪ್ರವಾಸದ ಕುರಿತು ಬರುವ ಟೀಕೆಗಳಿಗೆ ತಲೆಕೆಡಿಸಿಕೊಳ್ಳುವುದಿಲ್ಲ. ಟೀಕೆಗಳು ಸಾಯುತ್ತವೆ; ಆದರೆ ನಾವು ಮಾಡಿದ ಕೆಲಸಗಳು ಮಾತ್ರ ಉಳಿಯುತ್ತವೆ' ಎಂದು ಹೇಳಿದರು. ಸಮಾಜದ ಪ್ರತಿಯೊಂದು ವರ್ಗಕ್ಕೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಯಂತೆ ಸಮಾನ ಗೌರವ ದೊರೆಯಬೇಕು ಎಂಬುದು ಸರ್ಕಾರದ ಆಶಯ. ಸರ್ಕಾರದ ಐದು ಗ್ಯಾರಂಟಿ ಯೋಜನೆಗಳನ್ನು ಟೀಕಿಸಿದ್ದ ವಿರೋಧ ಪಕ್ಷಗಳಿಗೆ ಅವುಗಳನ್ನು ಜಾರಿಗೊಳಿಸುವ ಮೂಲಕ ಉತ್ತರ ನೀಡಿದ್ದೇವೆ. ಇದೇ ರೀತಿ ಪ್ರಜಾಸೇವಾ ವ್ಯವಸ್ಥೆಯೂ ದೇಶಕ್ಕೆ ಮಾದರಿಯಾಗಲಿದೆ ಎಂದು ಶಿವಕುಮಾರ್ ಹೇಳಿದರು. ರೋಗ ಗುಣಪಡಿಸುವ ವೈದ್ಯರಿರಲಿ, ನಾಡು ಕಟ್ಟುವ ಎಂಜಿನಿಯರಿರಲಿ, ಅನ್ನ ನೀಡುವ ರೈತನಿರಲಿ, ಸೇವೆ ಸಲ್ಲಿಸುವ ಅಧಿಕಾರಿಯಿರಲಿ, ನಾವೀನ್ಯತೆ ತರುವ ಉದ್ಯಮಿಯಿರಲಿ ಅಥವಾ ಸಮಾಜವನ್ನು ಮುನ್ನಡೆಸುವ ನಾಯಕರೇ ಇರಲಿ, ಪ್ರತಿಯೊಬ್ಬರ ಹಿಂದೆಯೂ ಶಿಕ್ಷಕರ ಶ್ರಮವಿದೆ ಎಂದು ಸಿಎಂ ತಿಳಿಸಿದರು.

# ವಿಬಿಜಿ ರಾಮ್ ಜಿ ಯೋಜನೆ ಮಾಹಿತಿ ಪಡೆದ ರೈತರು, ಸಾರ್ವಜನಿಕರು: ಗಮನ ಸೆಳೆದ ಮಾಹಿತಿ ಕೇಂದ್ರ

**• ಉದಯವಾಹಿನಿ ಯಲಬುರ್ಗಾ :**

ಪ್ರಜಾಸೇವಾ ಇಲಾಖೆ, ಜಿಲ್ಲಾಡಳಿತ ಕೊಪ್ಪಳ ವತಿಯಿಂದ ಕೊಪ್ಪಳ ಜಿಲ್ಲೆ ಯಲಬುರ್ಗಾ ತಾಲ್ಲೂಕಿನ ಹಿರೇವಂಕಲಕುಂಟಾ ಗ್ರಾಮ ಪಂಚಾಯತಿ ವ್ಯಾಪ್ತಿಯ ಚಿಕ್ಕವಂಕಲಕುಂಟಾ ಗ್ರಾಮದ ಬುದ್ಧ ಬಸವ ಅಂಬೇಡ್ಕರ್ ಭವನದಲ್ಲಿ ಆಯೋಜಿಸಿದ್ದ ಪ್ರಜಾಸೇವೆ ಆಂದೋಲನ ಸಭೆ, ಬಾಗಿಲಿಗೆ ಬಂತು ಸರ್ಕಾರ, ಸೇವೆಗೆ ಇರಲಿ ಸಹಕಾರ ಕಾರ್ಯಕ್ರಮದಲ್ಲಿ ವಿಕಸಿತ ಭಾರತ, ರೋಜಗಾರ ಆಜೀವಿಕ ಮಿಷನ್ (ಗ್ರಾಮೀಣ) ಯೋಜನೆಯ ಮಾಹಿತಿ ಶಿಕ್ಷಣ ಸಂವಹನ ಮಾಹಿತಿ ಕೇಂದ್ರವನ್ನು ಮಾನ್ಯ ಕೊಪ್ಪಳ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಕೆ.ಪಿ. ಮೋಹನ್ ರಾಜ್ ಸರ್, ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಚಾಲನೆ ನೀಡಿದರು.

ಜಿಲ್ಲಾ ಪಂಚಾಯತ್ ವ್ಯಾಪ್ತಿಯ ಗ್ರಾಮ ಪಂಚಾಯತಿಗಳಲ್ಲಿ ಅನುಷ್ಠಾನಗೊಳ್ಳುತ್ತಿರುವ ಬೂದು ನೀರು ನಿರ್ವಹಣೆ ಮಾಡೆಲ್ ಎಲ್ಲರ ಗಮನ ಸೆಳೆಯಿತು. ಇದೇ ವೇಳೆ ಈ ಭಾಗದ ರೈತರು, ಸಾರ್ವಜನಿಕರು ತಮ್ಮ ಜಮೀನಿನಲ್ಲಿ ವೈಯಕ್ತಿಕ ಕಾಮಗಾರಿಗಳ


☛ ಉದಯವಾಹಿನಿ ಚಿತ್ರ

ಕರಪತ್ರಗಳನ್ನು ಪಡೆದರು.

ಆಗಸ್ಟ್ 15 ರಿಂದ ಆರಂಭವಾಗಿರುವ ಜಾಬ್ ಕಾರ್ಡ್ ಅಭಿಯಾನದಡಿ ವಿತರಿಸಿದ ಹೊಸ ಜಾಬ್ ಕಾರ್ಡ್ ಫಲಾನುಭವಿಗಳಿಗೆ ಮಾನ್ಯರು ಜಾಬ್ ಕಾರ್ಡ್ ಗಳನ್ನು ವಿತರಿಸಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ನಿರ್ದೇಶಕರು, ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ವಿಬಿಜಿ ರಾಮ್ ಜಿ ಯೋಜನೆಯ ಜಿಲ್ಲಾ ಹಾಗೂ ತಾಲ್ಲೂಕು ಅಧಿಕಾರಿ, ಸಿಬ್ಬಂದಿ, ಗ್ರಾಮ ಪಂಚಾಯತಿ ಸಿಬ್ಬಂದಿ, ಸಾರ್ವಜನಿಕರು ಹಾಜರಿದ್ದರು.

# ಕೃಷ್ಣ ಸಂದೇಶ ಸಾರ್ವಕಾಲಿಕ: ಶಾಸಕ ವೇದವ್ಯಾಸ ಕಾಮತ್

**• ಉದಯವಾಹಿನಿ ಮಂಗಳೂರು**

ಮನುಕುಲದ ನೆಮ್ಮದಿ ಮತ್ತು ಉದ್ಧಾರಕ್ಕಾಗಿ ಭಗವಾನ್ ಶ್ರೀ ಕೃಷ್ಣ ನೀಡಿದ ಸಂದೇಶವು ಜಗತ್ತಿಗೆ ಸಾರ್ವಕಾಲಿಕವಾಗಿ ಅಗತ್ಯವಿದ್ದು, ಇದನ್ನು ಸದಾ ಪಾಲಿಸಲು ಪಣತೊಡಬೇಕು ಎಂದು ಮಂಗಳೂರು ದಕ್ಷಿಣ ಶಾಸಕ ಡಿ.ವೇದವ್ಯಾಸ ಕಾಮತ್ ಹೇಳಿದ್ದಾರೆ.

ಅವರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಂಯುಕ್ತ ಆಶ್ರಯದಲ್ಲಿ ಕುದ್ಮುಲ್ ರಂಗರಾವ್ ಪುರಭವನದಲ್ಲಿ ನಡೆದ ಶ್ರೀ ಕೃಷ್ಣ ಜಯಂತಿ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಶ್ರೀ ಕೃಷ್ಣ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ, ಕೃಷ್ಣನ ಚಿಂತನೆಗಳು ಸಮಾಜದ ಎಲ್ಲಾ ವರ್ಗಗಳಿಗೂ ಪ್ರಸ್ತುತವಾಗಿದೆ. ಸತ್ಯ, ನ್ಯಾಯಕ್ಕೆ ಸದಾ ನಿಷ್ಠುರವಾಗಿದ್ದ ಕೃಷ್ಣ ಸಂದೇಶಗಳು, ಉತ್ತಮ ಸಮಾಜ ನಿರ್ಮಾಣಕ್ಕೆ ಪೂರಕವಾಯಿತು ಎಂದು ಅವರು ಹೇಳಿದರು. ಕರಾವಳಿಯ ಎಲ್ಲಡೆ ನಡೆಯುತ್ತಿರುವ ಕೃಷ್ಣ ಜನ್ಮಾಷ್ಟಮಿ ಕಾರ್ಯಕ್ರಮಗಳು, ಪ್ರತೀ ಮನೆಯಲ್ಲೂ ಬೆಳಗುತ್ತಿವೆ. ಮುಂದಿನ ದಿನಗಳಲ್ಲಿ ರಾಜ್ಯ ಸರಕಾರದ ವತಿಯಿಂದ ನಡೆಯುವ ಶ್ರೀ ಕೃಷ್ಣ ಜಯಂತಿ ಕಾರ್ಯಕ್ರಮ ಇನ್ನಷ್ಟು ಅದ್ದೂರಿಯಾಗಿ ನಡೆಸಲು ಅಗತ್ಯ ಕ್ರಮ ಕೈಗೊಳ್ಳಬೇಕು.


☛ ಉದಯವಾಹಿನಿ ಚಿತ್ರ

ವಿವಿಧ ಸಂಘ ಸಂಸ್ಥೆಗಳ ಪಾಲುದಾರಿಕೆಯೊಂದಿಗೆ ವೈವಿಧ್ಯಮಯ ಕಾರ್ಯಕ್ರಮಗಳನ್ನು ನಡೆಸುವ ಮೂಲಕ ಶ್ರೀ ಕೃಷ್ಣ ಜಯಂತಿಗೆ ಮೆರುಗು ತರಬೇಕು ಎಂದು ಶಾಸಕ ಕಾಮತ್ ಸಲಹೆ ನೀಡಿದರು. ಕಾರ್ಯಕ್ರಮದಲ್ಲಿ ಕರ್ನಾಟಕ ಪರಿಸರ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ ಅಧ್ಯಕ್ಷೆ ಶಾಲೆಟ್ ಪಿಂಟೋ, ತುಳು ಸಾಹಿತ್ಯ ಅಕಾಡೆಮಿ ಅಧ್ಯಕ್ಷ ತಾರನಾಥ್ ಗಟ್ಟಿ ಕಾಪಿಕಾಡ್, ಮತ್ತಿತರರು ಉಪಸ್ಥಿತರಿದ್ದರು. ಕಾರ್ಯಕ್ರಮದ ಬಳಿಕ ಶ್ರೀ ಕೃಷ್ಣ ಸಂದೇಶಗಳನ್ನು ಸಾರುವ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಿತು.

# ರಾಜ್ಯದ ಮೂರು ಜಿಲ್ಲೆಗಳಲ್ಲಿ ಭೀಕರ ಬರ: ವೈಮಾನಿಕ ಸಮೀಕ್ಷೆ ನಡೆಸಿದ ಸಿಎಂ ಡಿಕೆ.ಶಿವಕುಮಾರ್


☛ ಉದಯವಾಹಿನಿ ಚಿತ್ರ

**• ಉದಯವಾಹಿನಿ ಬಾಗಲಕೋಟೆ:**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿ ತೀವ್ರಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬಳ್ಳಾರಿ, ವಿಜಯನಗರ ಹಾಗೂ ಬಾಗಲಕೋಟೆ ಜಿಲ್ಲೆಗಳ ವೈಮಾನಿಕ ಸಮೀಕ್ಷೆ ನಡೆಸಿದರು.

ಬಳಿಕ ಬಾಗಲಕೋಟೆ ಜಿಲ್ಲೆಗೆ ಖುದ್ದಾಗಿ ಭೇಟಿ ನೀಡಿದ ಅವರು ಶಿರೂರು ಗ್ರಾಮದಲ್ಲಿ ಬೆಳೆಗಳನ್ನು ಪರಿಶೀಲಿಸಿ, ರೈತರೊಂದಿಗೆ ಸಂವಾದ ನಡೆಸಿ, ಅವರ ಸಮಸ್ಯೆಗಳನ್ನು ಆಲಿಸಿದರು. ಈ ಮೂಲಕ ಬೆಳೆ ಹಾನಿಯ ಪ್ರಮಾಣವನ್ನು ಅಂದಾಜಿಸಿದರು.

ಜಿಲ್ಲಾ ಬರ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಕರ್ನಾಟಕವು ದೇಶದಲ್ಲೇ ಎರಡನೇ ಅತಿ ದೊಡ್ಡ ಒಣಭೂಮಿ ಪ್ರದೇಶವನ್ನು ಹೊಂದಿದ್ದು, ಬರವು ನೈಸರ್ಗಿಕ ಸವಾಲಾಗಿದೆ. ಇದನ್ನು ಎಲ್ಲರೂ ಒಗ್ಗಟ್ಟಾಗಿ ಎದುರಿಸಬೇಕಾಗಿದೆ ಎಂದು ಹೇಳಿದರು. ಕೇಂದ್ರದ ಬರ ಪರಿಶೀಲನಾ ತಂಡಕ್ಕೆ ಅಧಿಕಾರಿಗಳು ಯಾವುದೇ ತಪ್ಪು ಮಾಹಿತಿ ನೀಡಬಾರದು ಎಂದು ಸಿಎಂ ಎಚ್ಚರಿಕೆ ನೀಡಿದರು. ''ಸತ್ಯವನ್ನು ತಿಳಿಸಿ. ಬರ ಪರಿಸ್ಥಿತಿಯ ಬಗ್ಗೆ ನಿಖರವಾದ ಮಾಹಿತಿಯನ್ನು ನೀಡಿ'' ಎಂದು ಸೂಚಿಸಿದರು.

ಬರದಿಂದ ರೈತರು ಎದುರಿಸುತ್ತಿರುವ ಸಂಕಷ್ಟವನ್ನು ಕಡಿಮೆ ಮಾಡಲು ಸರ್ಕಾರದ ವಿವಿಧ ಇಲಾಖೆಗಳು ಹಾಗೂ ಅಧಿಕಾರಿಗಳು ಸಮನ್ವಯದಿಂದ ಕೆಲಸ ಮಾಡಬೇಕು. ಕೇಂದ್ರದ ಬರ ಪರಿಶೀಲನಾ ತಂಡಕ್ಕೆ ವಾಸ್ತವ ಪರಿಸ್ಥಿತಿಯ ನಿಖರ ಮಾಹಿತಿಯನ್ನು ಒದಗಿಸಬೇಕು ಎಂದು ಕರೆ ನೀಡಿದರು.

ಇದೇ ವೇಳೆ ಬಾಗಲಕೋಟೆ ಜಿಲ್ಲೆಯಲ್ಲಿ ಶೇ.40ರಷ್ಟು ಮಳೆ ಕೊರತೆಯಾಗಿದೆ ಎಂದು ತಿಳಿಸಿದ ಸಿಎಂ, ತಾವು ಭೇಟಿ ನೀಡಿದ ನಾಲ್ಕು ತಾಲ್ಲೂಕುಗಳಲ್ಲಿ ಬೆಳೆಗಳು ಸರಿಯಾಗಿ ಅಭಿವೃದ್ಧಿಯಾಗಿಲ್ಲ ಎಂದು ಹೇಳಿದರು. ''ಹೊಲಗಳು ಹಸಿರಾಗಿ ಕಾಣಿಸಿಕೊಳ್ಳಬಹುದು. ಆದರೆ, ಅದರಿಂದ ರೈತರಿಗೆ ಫಸಲು ಬಂದಿದೆ ಎಂದರ್ಥವಲ್ಲ'' ಎಂದು ತಿಳಿಸಿದರು.

> ಬೆಳೆ ವಿಮೆ ಯೋಜನೆಯಲ್ಲಿ ನಡೆಯುತ್ತಿರುವ ಅಕ್ರಮಗಳನ್ನು ತಡೆಗಟ್ಟಬೇಕು. ರೈತರನ್ನು ದಾರಿ ತಪ್ಪಿಸುವ ಏಜೆಂಟರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

# ವೈದ್ಯರ ನಿರ್ಲಕ್ಷದಿಂದ ಮಗು ಸಾವು ಪ್ರಕರಣ! ಜಾಗೃತ ನಾಯಕ ಬಳಗ ಆಗ್ರಹ

**• ಉದಯವಾಹಿನಿ ಹೊಸಪೇಟೆ.**

ನಗರದ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಹೆರಿಗೆ ಸಂದರ್ಭದಲ್ಲಿ ನವಜಾತ ಶಿಶು ಮರಣಿಸಿದ ಘಟನೆ ಕುರಿತಂತೆ ಇಂತಹ ಘಟನೆಗಳು ಮರುಕಳುಹಿಸದಂತೆ ಸೂಕ್ತ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳುವಂತೆ ಸ್ಥಳೀಯ ಜಾಗೃತ ನಾಯಕ ಬಳಗ ಒತ್ತಾಯಿಸಿದೆ.

ಈ ಕುರಿತು ಜಿಲ್ಲಾ ಆರೋಗ್ಯಾಧಿಕಾರಿಗಳಿಗೆ ಮನವಿಪತ್ರ ಸಲ್ಲಿಸಿರುವ ಜಾಗೃತ ನಾಯಕ ಬಳಗದ ಪದಾಧಿಕಾರಿಗಳು, ನಗರದ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಜರುಗಿದ ಘಟನೆಯಲ್ಲಿ ಆಸ್ಪತ್ರೆಯ ಕರ್ತವ್ಯನಿರತ ವೈದ್ಯರು ಹಾಗೂ ಸಿಬ್ಬಂದಿಗಳ ನಿರ್ಲಕ್ಷ್ಯದಿಂದ ನವಜಾತ ಶಿಶು ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ, ಕರ್ತವ್ಯದಲ್ಲಿ ನಿರ್ಲಕ್ಷ್ಯ ಮತ್ತು ಬೇಜವಾಬ್ದಾರಿತನ ತೋರಿದ ಆಸ್ಪತ್ರೆಯ ವೈದ್ಯರನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಿರುವ ಕ್ರಮವನ್ನು ಜಾಗೃತ


☛ ಉದಯವಾಹಿನಿ ಚಿತ್ರ

ನಾಯಕ ಬಳಗ ಸ್ವಾಗತಿಸಿದ್ದಾರೆ.

ವಿಜಯನಗರ ಜಿಲ್ಲಾ ಕೇಂದ್ರ ಹೊಸಪೇಟೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯು ಬಹುತೇಕವಾಗಿ ಬಡ ಮತ್ತು ಮಧ್ಯಮ ವರ್ಗದವರಿಗೆ ವೈದ್ಯಕೀಯ ಸೇವೆಯ ಒಂದು ಆಶಾಕಿರಣವಾಗಿದೆ. ಅತ್ಯಂತ ಅಗತ್ಯದ ವೈದ್ಯಕೀಯ ಸೇವೆ ನೀಡುವ ಆಸ್ಪತ್ರೆ ಇದಾಗಿದೆ. ಆದರೆ ಕೆಲ ಸೂಕ್ತ ತಜ್ಞವೈದ್ಯರ ಕೊರತೆ ಮತ್ತು ಕೆಲ ಸಿಬ್ಬಂದಿ

> ಈ ಘಟನೆಯಿಂದ ಈ ಆಸ್ಪತ್ರೆಯನ್ನು ಅವಲಂಭಿಸಿರುವ ಬಡ ಮತ್ತು ಮಧ್ಯಮ ವರ್ಗದ ಜನರು ಆಂತಕ ಪಡುವಂತಾಗಿದೆ. ಮತ್ತೊಮ್ಮೆ ಇಂತಹ ಘಟನೆಗಳು ಮರುಕಳಿಸದಂತೆ ಹಿರಿಯ ಅಧಿಕಾರಿಗಳು ಕ್ರಮಕೈಗೊಳ್ಳಬೇಕು.

ವರ್ಗದವರ ನಿರ್ಲಕ್ಷತನದಿಂದ ಇಂತಹ ಕಹಿ ಘಟನೆಗಳು ಪದೇ ಪದೇ ಮರುಕಳಿಸುತ್ತಿರುವುದನ್ನು ತೀವ್ರವಾಗಿ ಖಂಡಿಸಿದ್ದಾರೆ. ಹಾಗೂ ಅಸ್ಪತ್ರೆಗೆ ಅಗ್ಯವಿರುವ ವೈದ್ಯಕೀಯ ಸಿಬ್ಬಂದಿ ನಿಯೋಜಿಸುವಂತೆ ಮತ್ತು ಅಗತ್ಯ ವೈದ್ಯಕೀಯ ಯಂತ್ರೋಪಕರಣಗಳನ್ನು ಅಳವಡಿಸುವ ಮೂಲಕ ಮುಂಬರುವ ದಿನಗಳಲ್ಲಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಮತ್ತೊಮ್ಮೆ ಇಂತಹ ಕಹಿ ಘಟನೆಗಳು ಜರುಗದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಮನವಿಪತ್ರದಲ್ಲಿ ಜಾಗೃತ ನಾಯಕ ಬಳಗದ ಪದಾಧಿಕಾರಿಗಳು ಒತ್ತಾಯಿಸಿದ್ದರೆ.

# ಶಿಕ್ಷಣ ಕ್ಷೇತ್ರದಲ್ಲಿ ಉತ್ತರ ಕನ್ನಡಕ್ಕೆ ಮೂರನೇ ಸ್ಥಾನ: ಸಚಿವ ಲಕ್ಷ್ಮಣ ಸವದಿ

**• ಉದಯವಾಹಿನಿ ಅಂಕೋಲಾ:**

ಶಿಕ್ಷಕರ ಪ್ರಾಮಾಣಿಕ ಸೇವೆ ಮತ್ತು ಪರಿಶ್ರಮದ ಫಲವಾಗಿ ಉತ್ತರ ಕನ್ನಡ ಜಿಲ್ಲೆ ರಾಜ್ಯದ ಶಿಕ್ಷಣ ಕ್ಷೇತ್ರದಲ್ಲಿ ಮೂರನೇ ಸ್ಥಾನ ಗಳಿಸಿರುವುದು ಹೆಮ್ಮೆಯ ಸಂಗತಿ ಎಂದು ಸಹಕಾರ ಇಲಾಖೆ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಲಕ್ಷ್ಮಣ ಸವದಿಹೇಳಿದರು.

ಅವರು ಶನಿವಾರ, ಅಂಕೋಲಾದ ನಾಡವರ ಸಭಾಭವನದಲ್ಲಿ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಉಪನಿರ್ದೇಶಕರು (ಆಡಳಿತ) ಶಾಲಾ ಶಿಕ್ಷಣ ಇಲಾಖೆ, ಉತ್ತರ ಕನ್ನಡ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಅಂಕೋಲಾ ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಜಿಲ್ಲಾ ಮಟ್ಟದ ಶಿಕ್ಷಕರ ದಿನಾಚರಣೆ ಮತ್ತು ಉತ್ತರ ಕನ್ನಡ ಜಿಲ್ಲಾ ಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪ್ರಧಾನ ಸಮಾರಂಭ ಹಾಗೂ ನಿವೃತ್ತಿ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಸರಕಾರಿ ಶಾಲೆಗಳ ಗುಣಮಟ್ಟ ಮತ್ತು ಶಿಕ್ಷಕರ ಸೇವೆಯನ್ನು ಪ್ರಶಂಸಿದ ಸಚಿವರು 'ಶಿಕ್ಷಕರು ಕೇವಲ ಸಂಬಳಕ್ಕಾಗಿ ಕೆಲಸ ಮಾಡುವವರಲ್ಲ. ಸಮಾಜ ನಿರ್ಮಾಣದಲ್ಲಿ ಅವರ ಪಾತ್ರ ಮಹತ್ವದ್ದು. ಪ್ರಧಾನಿ ನರೇಂದ್ರ ಮೋದಿ, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಹಲವು ನಾಯಕರು ಸರಕಾರಿ ಶಾಲೆಗಳಲ್ಲಿ ಶಿಕ್ಷಣ ಪಡೆದಿದ್ದಾರೆ. ದೇಶ ಕಟ್ಟುವಲ್ಲಿ ಸರಕಾರಿ ಶಾಲೆಗಳ ಶಿಕ್ಷಕರ ಕೊಡುಗೆ ದೊಡ್ಡದು' ಎಂದು ಹೇಳಿದರು.

ಇತ್ತೀಚಿನ ಎಸ್ಎಸ್ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 625 ಅಂಕ ಗಳಿಸಿ ರಾಜ್ಯಕ್ಕೆ ಪ್ರಥಮ


☛ ಉದಯವಾಹಿನಿ ಚಿತ್ರ

> ಈ ಯೋಜನೆಗೆ ಜಿಲ್ಲಾ ಖನಿಜ ಪ್ರತಿಷ್ಠಾನ (ಡಿಎಂಎಫ್) ನಿಧಿಯಿಂದ 1 ಕೋಟಿ ಹಾಗೂ ಉಳಿದ ಮೊತ್ತವನ್ನು ಶಾಸಕರ ಅನುದಾನದ ಮೂಲಕ ಒದಗಿಸಿ ಕಾಮಗಾರಿ ಕೈಗೊಳ್ಳಲಾಗುವುದು ಎಂದು ತಿಳಿಸಿದರು. – ಸಚಿವ ಲಕ್ಷ್ಮಣ ಸವದಿ

ಸ್ಥಾನ ಪಡೆದ ವಿದ್ಯಾರ್ಥಿನಿ ಸರಕಾರಿ ಶಾಲೆಯಲ್ಲಿ ವ್ಯಾಸಂಗ ಮಾಡಿರುವುದು, ಸರಕಾರಿ ಶಾಲೆಗಳ ಶೈಕ್ಷಣಿಕ ಗುಣಮಟ್ಟಕ್ಕೆ ಸಾಕ್ಷಿಯಾಗಿದೆ ಎಂದರು.

ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುವ ಗ್ರಾಮೀಣ ಮತ್ತು ಬಡ ವಿದ್ಯಾರ್ಥಿಗಳ ಅನುಕೂಲ ಕ್ಕಾಗಿ ಅಂಕೋಲಾದಲ್ಲಿ ಸುಮಾರು ರೂ.2 ಕೋಟಿ ವೆಚ್ಚದಲ್ಲಿ ಆಧುನಿಕ ಡಿಜಿಟಲ್ ಗ್ರಂಥಾಲಯ ನಿರ್ಮಿಸಲಾಗುವುದು ಎಂದು ಸಚಿವರು ಘೋಷಿಸಿದರು.

## ಕಂಬಳ ಅಸೋಸಿಯೇಷನ್‌ನ ಬೈಲಾ ಹಾಗೂ ಸರ್ಕಾರದ ನೀತಿ-ಸಂಹಿತೆಗೆ ಬದ್ಧವಾಗಿ ಈ ಯೋಜನೆಯನ್ನು ರೂಪಿಸಲಾಗಿದೆ

# ಕಂಬಳ ಕಲಿಗಳಿಗೆ ತಾಲೀಮು: ಸರ್ಕಾರಿ ಮಾನ್ಯತೆಯ ತರಬೇತಿ ಶಿಬಿರ!

**• ಉದಯವಾಹಿನಿ ಮಂಗಳೂರು:**

ತುಳುನಾಡಿನ ಹೆಮ್ಮೆಯ ಜಾನಪದ ವೀರ ಕ್ರೀಡೆ ಕಂಬಳಕ್ಕೆ ಇತ್ತೀಚಿನ ವರ್ಷಗಳಲ್ಲಿ ಅಭೂತಪೂರ್ವ ಜನಪ್ರಿಯತೆ ವ್ಯಕ್ತವಾಗುತ್ತಿದೆ. ಕೆಸರುಗದ್ದೆಯಲ್ಲಿ ಮಿಂಚಿನ ವೇಗದಲ್ಲಿ ಮುನ್ನುಗ್ಗುವ ಕೋಣಗಳ ಜಿದ್ದಾಜಿದ್ದಿ ಕಣ್ತುಂಬಿಕೊಳ್ಳಲು ಜನಸಾಗರವೇ ಹರಿದುಬರುತ್ತಿದೆ.

**1 : 150 ರಿಂದ 160 ಕೋಣಗಳು**
**2 : ಹೆಚ್ಚಿದ ಕೋಣಗಳ ಜೋಡಿ**
**3 : ಓಟಗಾರರ ಸಂಖ್ಯೆ ಕಡಿಮೆ**

ಆದರೆ, ಕ್ರೀಡೆಯ ವೈಭವ ಹೆಚ್ಚಿದಂತೆ ಕಣದಲ್ಲಿ ನುರಿತ ಓಟಗಾರರ ಕೊರತೆ ಎದ್ದು ಕಾಣುತ್ತಿದೆ. ಈ ಹಿನ್ನೆಲೆಯಲ್ಲಿ ಕಂಬಳ ಕ್ರೀಡೆಗೆ ವೃತ್ತಿಪರ ಚೌಕಟ್ಟು ಕಲ್ಪಿಸಲು ರಾಜ್ಯ ಕಂಬಳ ಅಸೋಸಿಯೇಷನ್, ಜಿಲ್ಲಾ ಕಂಬಳ ಸಮಿತಿ ಹಾಗೂ ಕರ್ನಾಟಕ ಸರ್ಕಾರದ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಯೋಗದಲ್ಲಿ ಹತ್ತು ದಿನಗಳ ಬೃಹತ್ ಕಂಬಳ ತರಬೇತಿ ಶಿಬಿರ ಆಯೋಜನೆಗೊಂಡಿದೆ.

**ಹೆಚ್ಚಿದ ಕೋಣಗಳ ಜೋಡಿ, ಕಡಿಮೆಯಾದ ಸಾರಥಿಗಳು:** ಹಿಂದೆ ಕರಾವಳಿಯ ಸಾಂಪ್ರದಾಯಿಕ ಕಂಬಳಗಳಲ್ಲಿ 150 ರಿಂದ 160 ಕೋಣಗಳ ಜೋಡಿಗಳು ಮಾತ್ರ ಭಾಗವಹಿಸುತ್ತಿದ್ದವು. ಆದರೆ, ಇತ್ತೀಚೆಗೆ ಕಂಬಳದ ಮೇಲಿನ ಒಲವು ಹೆಚ್ಚಾಗಿ ಕೋಣಗಳ ಮಾಲೀಕರ ಸಂಖ್ಯೆ ಗಣನೀಯವಾಗಿ ಏರಿಕೆಯಾಗಿದೆ. ಪ್ರಸ್ತುತ 280ಕ್ಕೂ ಅಧಿಕ ಜೋಡಿ ಕೋಣಗಳು ಕಣಕ್ಕಿಳಿಯುತ್ತಿವೆ. ಆದರೆ, ಇಷ್ಟೊಂದು


☛ ಉದಯವಾಹಿನಿ ಚಿತ್ರ

**10 ದಿನಗಳ ಸಮಗ್ರ ತಾಲೀಮು (ಸೆಪ್ಟೆಂಬರ್ 16 ರಿಂದ 26)**

> ಕೇವಲ ಓಟಗಾರರಿಗೆ ಮಾತ್ರವಲ್ಲದೇ, ಕಂಬಳದ ತೀರ್ಪುಗಾರರು, ಫಲಿತಾಂಶ ಬರೆಯುವ ಬರಹಗಾರರು, ಮಂಜೊಟ್ಟಿಯಲ್ಲಿ ಕೋಣಗಳನ್ನು ಬಿಡಿಸುವವರು ಮತ್ತು ನಿಶಾನೆ ಹಿಡಿಯುವವರಿಗೂ ಪ್ರತ್ಯೇಕ ವಿಭಾಗಗಳಲ್ಲಿ ತಾಂತ್ರಿಕ ಜ್ಞಾನ ಧಾರೆ ಎರೆಯಲಾಗುತ್ತದೆ.

ಬೃಹತ್ ಪ್ರಮಾಣದ ಕೋಣಗಳನ್ನು ನಿಯಂತ್ರಿಸಿ ವೇಗವಾಗಿ ಓಡಿಸುವ ನುರಿತ ಯುವ ಓಟಗಾರರ ಸಂಖ್ಯೆ ಕಡಿಮೆ ಇದೆ. ಇಂಜಿನಿಯರಿಂಗ್ ಸೇರಿದಂತೆ ಉನ್ನತ ಪದವಿ ಪಡೆದ ವಿದ್ಯಾವಂತ ಯುವಕರು ಹಾಗೂ ಗ್ರಾಮೀಣ ಭಾಗದ ಬಡ ಕುಟುಂಬಗಳ

> ಸರ್ಕಾರದ ಅನುದಾನ ಹಾಗೂ ಇಲಾಖೆಯ ನೇರ ಸಹಭಾಗಿತ್ವದಲ್ಲಿ ಆರಂಭವಾಗುತ್ತಿರುವ ಈ ತರಬೇತಿ ಶಿಬಿರವು ಪ್ರಸಕ್ತ ಸಾಲಿನಿಂದ ಆರಂಭಗೊಂಡು, ಮುಂದಿನ ಪ್ರತಿ ವರ್ಷವೂ ನಿರಂತರವಾಗಿ ಮುಂದುವರಿಯಲಿದೆ. ಇದು ಗ್ರಾಮೀಣ ಪ್ರತಿಭೆಗಳಿಗೆ ಬದುಕು ಮತ್ತು ಗೌರವ ಎರಡನ್ನೂ ತಂದುಕೊಡಲಿದೆ ಎಂದು ಹೇಳಿದ್ದಾರೆ.
> -ದೇವಿಪ್ರಸಾದ್ ಶೆಟ್ಟಿ

ಪ್ರತಿಭಾವಂತ ತರುಣರಲ್ಲಿ ಅಪಾರ ಕ್ರೀಡಾಸಕ್ತಿ ಇದೆ.

ಇಂತಹ ಪ್ರತಿಭೆಗಳನ್ನು ಗುರುತಿಸಿ, ಅವರಿಗೆ ವೈಜ್ಞಾನಿಕ ತಾಲೀಮು ನೀಡಿ ಕಂಬಳದ ಮುಂದಿನ ಪೀಳಿಗೆಯ ಸಾರಥಿಗಳನ್ನಾಗಿ ಸಜ್ಜುಗೊಳಿಸುವುದು ಈ ಯೋಜನೆಯ ಮುಖ್ಯ ಉದ್ದೇಶ.

**ಅಭ್ಯರ್ಥಿಗಳ ಆಯ್ಕೆ (ಸೆಪ್ಟೆಂಬರ್ 6):** ಭಾನುವಾರ ಬೆಳಗ್ಗೆ 9:00 ರಿಂದ 10:30 ರವರೆಗೆ ಹೆಸರು ನೋಂದಾಯಿಸಿದ ಆಸಕ್ತ ಅಭ್ಯರ್ಥಿಗಳಿಗೆ ಆಯ್ಕೆ ಪ್ರಕ್ರಿಯೆ ಜರುಗಲಿದೆ. ರಾಜ್ಯ ಕಂಬಳ ಅಸೋಸಿಯೇಷನ್ ಪ್ರಧಾನ ಕಾರ್ಯದರ್ಶಿ ವಿಜಯಕುಮಾರ್ ಕಂಗಿನಮನೆ, ಜಿಲ್ಲಾ ಕಾರ್ಯದರ್ಶಿ ವಿದ್ಯಾಧರ್ ಜೈನ್ ಹಾಗೂ ಹಿರಿಯ ತೀರ್ಪುಗಾರರ ನೇತೃತ್ವದ ಉನ್ನತ ಸಮಿತಿ ಅರ್ಹ ಯುವಕರನ್ನು ಆಯ್ಕೆ ಮಾಡಲಿದೆ.

**ಶಿಬಿರದ ಉದ್ಘಾಟನೆ (ಸೆಪ್ಟೆಂಬರ್ 16):** ಕಾರ್ಕಳ ತಾಲ್ಲೂಕಿನ ಮೀಯಾರು ಕಂಬಳ ಗದ್ದೆಯ ಪ್ರಾಂಗಣದಲ್ಲಿ ಕಂಬಳದ ಪ್ರಾಯೋಜಕರು, ಪೋಷಕರು ಮತ್ತು ಕ್ರೀಡಾಭಿಮಾನಿಗಳ ಸಮ್ಮುಖದಲ್ಲಿ ಶಿಬಿರಕ್ಕೆ ವಿಧ್ಯುಕ್ತ ಚಾಲನೆ ದೊರೆಯಲಿದೆ.

**ಯೋಗ, ವ್ಯಾಯಾಮ, ಉಚಿತ ವಸತಿ ಹಾಗೂ ಸರ್ಕಾರಿ ಪ್ರಮಾಣಪತ್ರ:** ಶಿಬಿರಕ್ಕೆ ಆಯ್ಕೆಯಾಗುವ ಎಲ್ಲಾ ಯುವಕರಿಗೆ ಊಟ ಮತ್ತು ವಸತಿ ವ್ಯವಸ್ಥೆಯನ್ನು ಸಂಪೂರ್ಣ ಉಚಿತವಾಗಿ ಕಲ್ಪಿಸಲಾಗಿದೆ. ದಿನಚರಿಯಲ್ಲಿ ಶಿಸ್ತು, ಯೋಗಾಭ್ಯಾಸ, ದೈಹಿಕ ವ್ಯಾಯಾಮ, ದೇಹದಂಡನೆ ಹಾಗೂ ಕಂಬಳ ಕರೆಯಲ್ಲಿ ಕೋಣಗಳನ್ನು ಓಡಿಸುವ ಪ್ರಾಯೋಗಿಕ ತರಬೇತಿಯನ್ನು ಪರಿಣಿತ ಹಿರಿಯರಿಂದ ನೀಡಲಾಗುತ್ತದೆ. ತರಬೇತಿಯನ್ನು ಯಶಸ್ವಿಯಾಗಿ ಪೂರೈಸಿ ಅರ್ಹತೆ ಪಡೆಯುವ ಅಭ್ಯರ್ಥಿಗಳಿಗೆ ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಅಧಿಕೃತ ಪ್ರಮಾಣಪತ್ರ ವಿತರಿಸಲಾಗುತ್ತದೆ. ಈ ಬಗ್ಗೆ ಮಾತನಾಡಿದ ರಾಜ್ಯ ಕಂಬಳ ಅಸೋಸಿಯೇಷನ್ ಅಧ್ಯಕ್ಷ ಬೆಳಪು ದೇವಿಪ್ರಸಾದ್ ಶೆಟ್ಟಿ, ಕಂಬಳ ಅಸೋಸಿಯೇಷನ್‌ನ ಬೈಲಾ ಹಾಗೂ ಸರ್ಕಾರದ ನೀತಿ-ಸಂಹಿತೆಗೆ ಬದ್ಧವಾಗಿ ಈ ಯೋಜನೆಯನ್ನು ರೂಪಿಸಲಾಗಿದೆ.

# ಹಾವು ಕಡಿದು ಎಮ್ಮೆ ಸಾವು

**• ಉದಯವಾಹಿನಿ ಔರಾದ್ :**

ತಾಲ್ಲೂಕಿನ ಖಾಶೆಂಪುರ( ಬಿ) ಗ್ರಾಮದ ರೈತ ಮಹಿಳೆ ಸಂಗೀತಾ ಗಂಡ ಸಂಗಪ್ಪ ಬಿರಾದಾರ ಅವರಿಗೆ ಸೇರಿದ 70 ಸಾವಿರ ರೂಗಳ ಮೌಲ್ಯದ ಎಮ್ಮೆ ಹೊಲದಲ್ಲಿ ಮೇಯಲು ಹೋದಾಗ ಹಾವು ಕಡಿದು ಮೃತ ಪಟ್ಟಿರುವ ಘಟನೆ ಮುಂಜಾನೆ 8 ಗಂಟೆಗೆ ಜರುಗಿದೆ.

ಮೂಲತಃ ಬೀದರ್ ತಾಲ್ಲೂಕಿನ ಮರಖಲ್ ಗ್ರಾಮದ ನಿವಾಸಿಗಳಾಗಿರುವ ಈ ಬಡದಂಪತಿಗಳು ಖಾಶೆಂಪುರ ( ಬಿ) ಗ್ರಾಮದಲ್ಲಿ ಸ್ವಂತ ಹೊಲ ಇರುವ ಕಾರಣ , ನಾಲ್ಕು ವರ್ಷದಿಂದ ಗದ್ದೆ ಕೆಲಸ ಮಾಡಿಕೊಂಡು ಖಾಶೆಂಪುರ ( ಬಿ) ದಲ್ಲಿ ನೆಲೆಸಿರುವಾಗ ಈ ಘಟನೆ ಜರುಗಿದೆ. ಸುದ್ದಿ ತಿಳಿದು ಸ್ಥಳಕ್ಕೆ ವಡಗಾಂವ (ದೆ ) ಸರ್ಕಾರಿ ಪಶು ಆಸ್ಪತ್ರೆಯ ವೈದ್ಯರು ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ. ಈ ಕುರಿತು ಸಂತಪೂರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಪಶು ಆಸ್ಪತ್ರೆಯ ಪರಮೇಶ ರಾಠೋಡ, ಎಎಸ್ಐ ರವೀಂದ್ರ ಜಮಾದಾರ , ರಾಜಕುಮಾರ ಪಾಂಚಾಳ, ಸಂಗೀತಾ, ಸಂಗಪ್ಪ ಬಿರಾದಾರ ಇದ್ದರು.

# ಶ್ರೀಕೃಷ್ಣನ ಬಾಲ್ಯದ ಲೀಲೆ ; ಭಕ್ತರ ಮನಸೆಳೆಯುವ ಅನಂತ ಮಹಿಮೆ

**• ಉದಯವಾಹಿನಿ ಕಮಲನಗರ:**

ದ್ವಾಪರ ಯುಗದ ದಿವ್ಯಾವತಾರ ಶ್ರೀ ಕೃಷ್ಣನ ಬಾಲ್ಯದ ಲೀಲೆಗಳು ಅಪಾರ ಹಾಗೂ ಕೌತುಕಮಯ. ಗೋಕುಲ ಮತ್ತು ಬೃಚಿದಾವನಗಳಲ್ಲಿ ಕೃಷ್ಣ ನಡೆಸಿದ ಪ್ರತಿಯೊಂದು ಲೀಲೆಯ ಭಕ್ತರ ಮನಸ್ಸಿಗೆ ಆನಂದವನ್ನು ನೀಡುವ ಜೊತೆಗೆ ಧರ್ಮದ ಸಂದೇಶವನ್ನು ಸಾರುತ್ತದೆ ಎಂದು ವಿವೇಕಾನಂದ ಟ್ರಸ್ಟ್‌ನ ಅಧ್ಯಕ್ಷ ಸಂಗಮೇಶ ಬಿರಾದಾರ ಹೇಳಿದರು.


☛ ಉದಯವಾಹಿನಿ ಚಿತ್ರ

ಪಟ್ಟಣದ ಭಾಗಿರಥಿ ಪಬ್ಲಿಕ್ ಶಾಲೆಯಲ್ಲಿ ಶ್ರೀಕೃಷ್ಣನ ಜನ್ಮಷ್ಟಮಿ ಪ್ರಯುಕ್ತ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕೃಷ್ಣನ ಭಾವಚಿತ್ರಕ್ಕೆ ಪೂಜೆ ನೆರವೇರಿಸಿದ ನಂತರ ಮಾತನಾಡಿದರು.

ಕಂಸ ಕಳುಹಿಸಿದ ಪೂತನಿ, ತೃಣಾವರ್ತ ಮತ್ತು ಬಕಸ್ಮರರಂತಹ ರಾಕ್ಷಸರನ್ನು ಭಾಲ್ಯದಲ್ಲೇ ಸಂಹರಿಸಿದ ಶ್ರೀಕೃಷ್ಣ. ತನ್ನ ಲೀಲೆಗಳ ಮೂಲಕ ದುಷ್ಟಶಿಕ್ಷಣ ಮತ್ತು ಶಿಷ್ಟರಕ್ಷಣೆ ಮಾಡಿದನು. ಕೃಷ್ಣನ ಈ ಲೀಲೆಗಳು ಇಂದಿಗೂ ಭಾರತೀಯ ಸಂಸ್ಕೃತಿ ಮತ್ತು ಸಾಹಿತ್ಯದಲ್ಲಿ ವಿಶೇಷ ಸ್ಥಾನ ಪಡೆದಿವೆ ಎಂದು ತಿಳಿಸಿದರು.ಮುಖ್ಯ ಶಿಕ್ಷಕ ಮನೋಜಕುಮಾರ ಹಿರೇಮಠ ಅಧ್ಯಕ್ಷತೆ ವಹಿಸಿ ಮಾತನಾಡಿದರು.

# ಕಾಡುಹಂದಿ ದಾಳಿಗೆ ರೈತ ಬಲಿ

**• ಉದಯವಾಹಿನಿ ಭಾಲ್ಕಿ:**

ಕಾಡುಹಂದಿ ದಾಳಿಗೆ ರೈತರೊಬ್ಬರು ಮೃತಪಟ್ಟಿದ್ದಾರೆ. ತಾಲ್ಲೂಕಿನ ಆನಂದವಾಡಿಯ ರೈತ ಚನ್ನಬಸಪ್ಪ ಶಿವಲಿಂಗಪ್ಪ ಭೂರೆ(65) ಮೃತ ದುರ್ದೈವಿ. ಇವರಿಗೆ ಪತ್ನಿ, ಇಬ್ಬರು ಪುತ್ರರು, ಪುತ್ರಿ ಇದ್ದಾರೆ.ಇವರು ಬೆಳಿಗ್ಗೆ 6 ಗಂಟೆ ಸುಮಾರಿಗೆ ಕೃಷಿ ಚಟುವಟಿಕೆ ನಿಮಿತ್ತ ಹೊಲಕ್ಕೆ ಹೊರಟ್ಟಿದ್ದಾರೆ. ಆ ಸಂದರ್ಭದಲ್ಲಿ ದಾರಿ ಮಧ್ಯದಲ್ಲಿ ಕಾಡುಹಂದಿ ದಿಢೀರ ದಾಳಿ ನಡೆಸಿ ವಯೋವೃದ್ಧ ರೈತ ಚನ್ನಬಸಪ್ಪ ಎಂಬುವರನ್ನು ಹೊರಳಾಡಿಸಿ ಗಂಭೀರವಾಗಿ ಗಾಯಗೊಳಿಸಿದೆ.

ತಲೆ, ಕುತ್ತಿಗೆ, ಹೊಟ್ಟೆ, ಕಾಲಿನ ಭಾಗಕ್ಕೆ ಕಾಡುಹಂದಿ ಕಚ್ಚಿದ್ದರಿಂದ ರಕ್ತ ತೀವ್ರ ಸ್ವರೂಪವಾಗಿ ಹೊರ ಬಂದಿದೆ. ಇದೇವೇಳೆ ಒರ್ವ ಮಹಿಳೆ ಸಂಪತಬಾಯಿ ಹೇಡೆ ಎಂಬುವರ ಮೇಲೆ ಕೂಡ ಕಾಡುಹಂದಿ ದಾಳಿ ನಡೆಸಿದೆ. ತಕ್ಷಣಕ್ಕೆ ಇಬ್ಬರನ್ನೂ ಗ್ರಾಮಸ್ಥರು ಸೇರಿ ಭಾಲ್ಕಿಯ ಸಾರ್ವಜನಿಕ ಆಸ್ಪತ್ರೆಗೆ ದಾಖಲಿಸಿ ಪ್ರಾಥಮಿಕ ಚಿಕಿತ್ಸೆ ಕೊಡಿಸಿದ್ದಾರೆ. ನಂತರ ಹೆಚ್ಚಿನ ಚಿಕಿತ್ಸೆಗಾಗಿ ಸಂಪತಬಾಯಿ ಹೇಡೆ ಅವರನ್ನು ಬೀದರ್ನ ಬ್ರಿಮ್ಸ್ ಆಸ್ಪತ್ರೆಗೆ ದಾಖಲಿಸಿ ಶಸ್ತ್ರಚಿಕಿತ್ಸೆ ನಡೆಸಿದ್ದು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

# ಕೂಡ್ಲಿಗಿ ಪ್ರಜಾಸೇವ ಉದ್ಘಾಟನಾ ಸಮಾರಂಭ


☛ ಉದಯವಾಹಿನಿ ಚಿತ್ರ

**• ಉದಯವಾಹಿನಿ ಕೂಡ್ಲಿಗಿ.**

ರಾಜ್ಯದ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಅವರ ಕನಸಿನ ಕೂಸಿನ ಯೋಜನೆಯಾದ ಪ್ರಜಾಸೇವಾ ಇಲಾಖೆ ಹಾಗೂ ಆಂದೋಲನಕ್ಕೆ ಇಂದು ಅಧಿಕೃತ ಚಾಲನೆ ನೀಡುವ ಬೃಹತ್ ವೇದಿಕೆ ಕಾರ್ಯಕ್ರಮದಲ್ಲಿ ಬಿಗ್ ಬಾಸ್ ಖ್ಯಾತಿಯ ಹನುಮಂತು ಅವರಿಂದ ಜಾನಪದ ಗೀತೆಗಳ ಅರ್ಥಪೂರ್ಣ ಗಾಯನ ನೆರೆದ ಜನತೆಯ ಮನಮುಟ್ಟಿತು.

ಶಿವದ್ಯಾನ ಮಾಡಣ್ಣ ಸೇರಿದಂತೆ ಇತರೆ ಜಾನಪದ ಗಾಯನಗಳು ನೆರೆದ ಜನರನ್ನು ಕುಳಿತ ಜಾಗದಲ್ಲೇ ಮಂತ್ರಮುಗ್ದರನ್ನಾಗಿ ಹನುಮಂತನ ಗಾಯನದಲ್ಲಿ ತೇಲಿಸಿತು. ಉಸ್ತುವಾರಿ ಸಚಿವ ಬಸವಂತಪ್ಪ, ಕೂಡ್ಲಿಗಿ ಶಾಸಕ ಡಾ ಶ್ರೀನಿವಾಸ, ಹೊಸಪೇಟೆ ಶಾಸಕ ಗವಿಯಪ್ಪ, ಹರಪನಹಳ್ಳಿ ಶಾಸಕಿ ಲತಾ ಎಂ ಪಿ, ಹಗರಿಬೊಮ್ಮನಹಳ್ಳಿ ಶಾಸಕ ನೇಮಿರಾಜ್ ನಾಯ್ಕ್ ಸೇರಿದಂತೆ ಇತರೆ ಗಣ್ಯರು, ರಾಜ್ಯಮಟ್ಟದ ಅಧಿಕಾರಿಗಳು ಜಿಲ್ಲಾಡಳಿತ ತಾಲೂಕು ಆಡಳಿತ ಉಪಸ್ಥಿತರಿದ್ದರು.

# ವಿಬಿಜಿ ರಾಮ್ ಜಿ ಕಾಮಗಾರಿ ವೇಳೆ ಕೂಲಿ ಕಾರ್ಮಿಕರಿಗೆ ಚಿನ್ನದ ನಾಣ್ಯಗಳ ನಿಧಿ ಪತ್ತೆ!

**• ಉದಯವಾಹಿನಿ ಬೆಳಗಾವಿ:**

ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಇಂಚಲ ಗ್ರಾಮದಲ್ಲಿ ಕೆಲಸ ಮಾಡುತ್ತಿದ್ದ ಕೂಲಿ ಕಾರ್ಮಿಕರಿಗೆ ಗಡಿಗೆಯೊಳಗೆ 14 ಚಿನ್ನದ ನಾಣ್ಯಗಳು ಪತ್ತೆಯಾಗಿವೆ. ಬಿಸಿಎಂ ಹಾಸ್ಟೆಲ್ ಸಮೀಪ ಕೆಲಸ ಮಾಡುವ ವೇಳೆ ನಾಣ್ಯಗಳು ಸಿಕ್ಕಿದ್ದು, ಒಟ್ಟು 54.8 ಗ್ರಾಂ ತೂಕ ಹೊಂದಿರುವ ಇವುಗಳ ಮೌಲ್ಯ ಸುಮಾರು 8.27 ಲಕ್ಷ ಎಂದು ಅಂದಾಜಿಸಲಾಗಿದೆ.

ನಾಣ್ಯಗಳು ಪತ್ತೆಯಾದ ಕೂಡಲೇ ಕೂಲಿ ಕಾರ್ಮಿಕರು ಅವುಗಳನ್ನು ಅಧಿಕಾರಿಗಳಿಗೆ ಒಪ್ಪಿಸಿ ಪ್ರಾಮಾಣಿಕತೆ ಮೆರೆದಿದ್ದಾರೆ. ಪಿಡಿಒ ಹಾಗೂ ತಾಲ್ಲೂಕು ಪಂಚಾಯಿತಿ ಸಿಬ್ಬಂದಿ ಸಮ್ಮುಖದಲ್ಲಿ ಸವದತ್ತಿ ತಹಶೀಲ್ದಾರ್ ಮಲ್ಲಿಕಾರ್ಜುನ ಹೆಗ್ಗಣ್ಣವರ ಅವರಿಗೆ ನಾಣ್ಯಗಳನ್ನು ಹಸ್ತಾಂತರಿಸಲಾಗಿದೆ. ಬಳಿಕ ತಹಶೀಲ್ದಾರ್ ಅವರು ಎಲ್ಲಾ ನಾಣ್ಯಗಳನ್ನು ಖಜಾನೆಗೆ ಒಪ್ಪಿಸಲಾಗಿದೆ.

ಪತ್ತೆಯಾದ ನಾಣ್ಯಗಳ ಮೇಲೆ ಆನೆಯ ಚಿತ್ರ ಇರುವುದಾಗಿ ತಿಳಿದುಬಂದಿದೆ. ತಲಕಾಡಿನ ಗಂಗರ ರಾಜಲಾಂಛನ ಆನೆಯಾಗಿದ್ದ ಹಿನ್ನೆಲೆಯಲ್ಲಿ, ಈ ನಾಣ್ಯಗಳು ಗಂಗರ ಕಾಲಕ್ಕೆ ಸಂಬಂಧಿಸಿರಬಹುದೇ ಎಂಬ ಕುತೂಹಲ ಮೂಡಿದೆ. ನಾಣ್ಯಗಳು ಕ್ರಿ.ಶ. 10ರಿಂದ 15ನೇ ಶತಮಾನದ ಅವಧಿಗೆ ಸೇರಿದವು ಎಂಬ ಅನುಮಾನ ವ್ಯಕ್ತವಾಗಿದೆ. ಆದರೆ ನಾಣ್ಯಗಳ ನಿಖರ ಕಾಲಘಟ್ಟ ಹಾಗೂ ಐತಿಹಾಸಿಕ ಹಿನ್ನೆಲೆಯನ್ನು ಖಚಿತಪಡಿಸಲು ಹೆಚ್ಚಿನ ಪರಿಶೀಲನೆ ಅಗತ್ಯವಿದೆ.

